O.S .No.418/2015
PW-1

ದಿನಾಂಕ: 29.01.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

<u>ಪಾಟೀ ಸವಾಲು **5** ಮತ್ತು **6** ನೇ ಪ್ರತಿವಾದಿ ಪರ ಶ್ರೀ ಬಿ.ಎ.ಎಸ್. ವಕೀಲರಿಂದಃ</u>

ನಾನು 6 ನೇ ತರಗತಿಯವರೆಗೂ ಓದಿರುತ್ತೇನೆ. ನಾನು ಪಿರಿಯಾಪಟ್ಟಣ ತಾಲ್ಲೂಕಿನ ಮರಟಿಕೊಪ್ಪಲಿನಲ್ಲಿ ವಾಸವಾಗಿರುತ್ತೇನೆ. ನಿಮ್ಮ ವಾದ ಪತ್ರದಲ್ಲಿ ಯಾವ ವಿಳಾಸದಲ್ಲಿ ವಾಸ ಇದ್ದೇನೆಂದು ಬರೆಸಿದ್ದೀರಾ ಎಂದರೆ ಸಾಕ್ಷಿ ಮರಟಿಕೊಪ್ಪಲು ಎಂದು ಹೇಳುತ್ತಾರೆ. ನನ್ನ ಮಗ ಪಿರಿಯಾಪಟ್ಟಣದಲ್ಲಿ ಐ.ಟಿ.ಐ ವಿದ್ಯಾಭ್ಯಾಸ ಮಾಡುತ್ತಿದ್ದಾನೆ. ನೀವು ಯಾವತ್ತೂ ಕುರುಬರಹೊಸಹಳ್ಳಿಯಲ್ಲಿ ವಾಸ ಇಲ್ಲ ಎಂದರೆ ಸಾಕ್ಷಿ ಇದ್ದೇವೆ ಎಂದು ಹೇಳುತ್ತಾರೆ. ಕುರುಬರಹೊಸಹಳ್ಳಿಯಲ್ಲಿ ವಾಸ ಇರುವ ಬಗ್ಗೆ ದಾಖಲಾತಿ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿ ಪಡೆಸಿದ್ದೇನೆ ಎಂದು ಹೇಳುತ್ತಾರೆ. ಏನು ದಾಖಲಾತಿ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿ ಚುನಾವಣೆ ಗುರುತಿನ ಚೀಟಿ, ಪಡಿತರ ಚೀಟಿ ಹಾಜರುಪಡಿಸಿದ್ದೇನೆ ಎಂದು ಹೇಳುತ್ತಾರೆ.

ನೀವು ಮದುವೆಯಾದಾಗಿನಿಂದ ನಿಮ್ಮ ತಾಯಿ ಮನೆಯಲ್ಲಿ ಮರಟಿಕೊಪ್ಪಲಿನಲ್ಲಿ ವಾಸ ಇದ್ದೀರಿ ಎಂದರೆ ಸಾಕ್ಷಿ ನನ್ನ ಯಜಮಾನರು ಮೃತಪಟ್ಟ ನಂತರ ವಾಸ ಇದ್ದೇನೆ ಎಂದು ಹೇಳುತ್ತಾರೆ. ನೀವು ಮದುವೆಯಾದಾಗಿನಿಂದ ನೀವು, ನಿಮ್ಮ ಗಂಡ ಎಲ್ಲರೂ ನಿಮ್ಮ ತಾಯಿ ಮನೆ ಮರಟಿಕೊಪ್ಪಲಿನಲ್ಲಿ ವಾಸ ಇದ್ದೀರಿ ಎಂದರೆ ಸರಿಯಲ್ಲ.

ವಾದ ಪತ್ರದಲ್ಲಿ ಬರೆದಿರುವ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. 1 ನೇ ಪ್ರತಿವಾದಿಗೆ ಯಾವ ಯಾವ ಸ.ನಂ. ನಲ್ಲಿ ಎಷ್ಟು ಜಮೀನು ಇದೆ ಎಂದು ಗೊತ್ತಾ ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ. ಸದರಿ ಜಮೀನುಗಳು 1 ನೇ ಪ್ರತಿವಾದಿಗೆ ಹೇಗೆ ಬಂತು ಎಂದು ತಿಳಿದುಕೊಂಡಿದ್ದೀರಾ ಎಂದರೆ ಸಾಕ್ಷಿ ತಿಳಿದುಕೊಂಡೆ, ದಾವೆ ಹೂಡಿರುವುದು ಎಂದು ಹೇಳುತ್ತಾರೆ.

5 ಮತ್ತು 6 ನೇ ಪ್ರತಿವಾದಿಗಳು ದಾವೆಯಲ್ಲಿ ಏನು ತಕರಾರು ಸಲ್ಲಿಸಿದ್ದಾರೆಂದು ತಿಳಿದುಕೊಂಡಿಲ್ಲ. 1 ರಿಂದ 4 ನೇ ಪ್ರತಿವಾದಿಗಳು ದಾವೆಯಲ್ಲಿ ಏನು ತಕರಾರು ಸಲ್ಲಿಸಿದ್ದಾರೆಂದು ತಿಳಿದುಕೊಂಡಿಲ್ಲ. ದಾವಾ ತಪಶೀಲು ಆಸ್ತಿ ನಂ.1 ಮತ್ತು 2, 1 ನೇ ಪ್ರತಿವಾದಿಗೆ ಸಾಗುವಳಿ ಮುಖೇನ ಬಂದಂತಹ ಆಸ್ತಿ ಎಂದರೆ ಸಾಕ್ಷಿ ಏನೋ ಗೊತ್ತಿಲ್ಲ ಎಂದು ಹೇಳುತ್ತಾರೆ. ಸಾಕ್ಷಿ ಮುಂದುವರೆದು ಹೌದು ಕೊಟ್ಟಿರಬಹುದು ಎಂದು ಹೇಳುತ್ತಾರೆ. ದಾವಾ ತಪಶೀಲು ಆಸ್ತಿ ನಂ.3, ನಿಮ್ಮ ಅತ್ತೆಗೆ ಸಾಗುವಳಿ ಮುಖೇನ ಬಂದಂತಹ ಆಸ್ತಿ ಎಂದರೆ ಸರಿಯಲ್ಲ. ದಾವಾ ತಪಶೀಲು ಆಸ್ತಿ ನಂ.4 ನ್ನು 1 ನೇ ಪ್ರತಿವಾದಿ ಕ್ರಯಕ್ಕೆ ಹೊಸೂರು ಕೊಡಲು ಕಾಲೋನಿಯ ನರಸಪ್ಪಯ್ಯನ

ಮಗ ಸುರೇಶ ರವರಿಂದ ಪಡೆದಂತಹ ಆಸ್ತಿ ಎಂದರೆ ಸರಿ. ಸಾಕ್ಷಿ ಮುಂದುವರೆದು ಯಾರಿಂದ ಖರೀದಿಸಿದರು ಎಂದು ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. 1990 ರಲ್ಲಿ ದಾವಾ ತಪಶೀಲು ಆಸ್ತಿ ನಂ.4 ರಲ್ಲಪಿ 2 ಎಕರೆ ಜಮೀನನ್ನು ಕುರುಬರಹೊಸಹಳ್ಳಿಯ ಬಸವಣ್ಣಯ್ಯ ರವರ ಹೆಂಡತಿಯಾದ ಶಿವಮ್ಮ ರವರಿಂದ 1 ನೇ ಪ್ರತಿವಾದಿ ಖರೀದಿಸಿರುತ್ತಾರೆಂದರೆ ಸರಿ. ದಾವಾ ತಪಶೀಲು ಆಸ್ತಿ ನಂ.1, 2 ಮತ್ತು 4, 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಎಂದರೆ ಸಾಕ್ಷಿ ಇಲ್ಲ ಎಂದು ಹೇಳುತ್ತಾರೆ. ದಾವಾ ತಪಶೀಲು ಆಸ್ತಿ ನಂ.3 ನಿಮ್ಮ ಅತ್ತೆ ಅಕ್ಕಯ್ಯಮ್ಮನ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಗೆ ಯಾವುದೇ ಪಿತ್ರಾರ್ಜಿತ ಆಸ್ತಿ ಇಲ್ಲ ಎಂದರೆ ಸರಿಯಲ್ಲ. ಯಾವ ಆಸ್ತಿ ಪಿತ್ರಾರ್ಜಿತ ಆಸ್ತಿ ಎಂದರೆ ಸಾಕ್ಷಿ ಗೊತ್ತಿಲ್ಲ, ದಾಖಲೆ ತಂದು ಕೊಟ್ಟಿದ್ದೇನೆ ಎಂದು ಹೇಳುತ್ತಾರೆ.

ನನ್ನ ಮಾವನ ತಂದೆ ಹೆಸರು ಕರೀಗೌಡ. ಕರೀಗೌಡರ ಹೆಸರಿನಲ್ಲಿ ಆಸ್ತಿ ಇತ್ತು ಎಂದು ತೋರಿಸಲು ದಾಖಲಾತಿ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿ ಕೊಟ್ಟಿದ್ದೇನೆ ಎಂದು ಹೇಳುತ್ತಾರೆ. ಏನು ದಾಖಲಾತಿ ಹಾಜರುಪಡಿಸಿದ್ದೀರಿ ಎಂದರೆ ಸಾಕ್ಷಿ ಪಹಣಿ ಕೊಟ್ಟಿದ್ದೇನೆ ಎಂದು ಹೇಳುತ್ತಾರೆ. ಸಾಕ್ಷಿಗೆ ನಿಪಿ-3 ರಿಂದ 18 ದಾಖಲಾತಿಗಳು ಪಹಣಿ ಪತ್ರಿಕೆಗಳನ್ನು ತೋರಿಸಿದ್ದು, ಅದನ್ನು ಓದುವಂತೆ ಕೇಳಿದ್ದು, ಸಾಕ್ಷಿ ಓದಲು ಬರುವುದಿಲ್ಲ ಎಂದು ಹೇಳುತ್ತಾರೆ. ನ್ಯಾಯಾಲಯದ ಮುಂದೆ ಹಾಜರುಪಡಿಸಿರುವ ನಿಪಿ-3 ರಿಂದ 18, 1 ನೇ ಪ್ರತಿವಾದಿಯ ಹೆಸರಿನಲ್ಲಿರುವ ಪಹಣಿ ಎಂದರೆ ಸರಿ. ಸಾಕ್ಷಿ ಮುಂದುವರೆದು ನಿಂಗಾಜಮ್ಮ, ಕರೀಗೌಡ ಹಾಗೂ ಮರೀಗೌಡರ ಹೆಸರಿನಲ್ಲಿರುವುದನ್ನು ಕೊಟ್ಟಿದ್ದೇನೆ ಎಂದು ಹೇಳುತ್ತಾರೆ.

1 ನೇ ಪ್ರತಿವಾದಿ ದಾವಾ ಆಸ್ತಿಗಳ ಮೇಲೆ ಗುರುಪುರ ಎಸ್.ಬಿ.ಐ ಬ್ಯಾಂಕಿನಲ್ಲಿ ಸಾಲ ಪಡೆದಿರುತ್ತಾರೆಂದರೆ ಸರಿ. ಸದರಿ ಬ್ಯಾಂಕ್ ಸಾಲ ಹಾಗೂ ಕೈಸಾಲವನ್ನು ತೀರಿಸಲು ದಾವಾ ತಪಶೀಲು ಆಸ್ತಿ ನಂ.4 ನ್ನು 1 ನೇ ಪ್ರತಿವಾದಿ 5 ನೇ ಪ್ರತಿವಾದಿಗೆ ದಿಃ 22.03.2004 ರಂದು ಮಾರಾಟ ಮಾಡಿರುತ್ತಾರೆಂದರೆ ಸರಿಯಲ್ಲ. ದಿಃ 22.03.2004 ರಂದೇ 1 ನೇ ಪ್ರತಿವಾದಿ 5 ನೇ ಪ್ರತಿವಾದಿಗೆ ಸ್ವಾಧೀನವನ್ನು ಬಿಟ್ಟು ಕೊಟ್ಟಿರುತ್ತಾರೆಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ಎಂ.ಆರ್.152/2003-04 ರಂತೆ 5 ನೇ ಪ್ರತಿವಾದಿ ಖಾತೆಯನ್ನು ಅವರ ಹೆಸರಿಗೆ ವರ್ಗಾವಣೆ ಮಾಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ. 6 ನೇ ಪ್ರತಿವಾದಿ 5 ನೇ ಪ್ರತಿವಾದಿಯ ಮಗ ಎಂದರೆ ಸರಿ. 5 ನೇ ಪ್ರತಿವಾದಿ ಖರೀದಿ ಮಾಡಿರುವ ಆಸ್ತಿ 6 ನೇ ಪ್ರತಿವಾದಿಯ ಭಾಗಕ್ಕೆ ನೀಡಲಾಗಿತ್ತು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ. ದಾವಾ ತಪಶೀಲು ಆಸ್ತಿ ನಂ.4 ನ್ನು ಪಾರಿಕತ್ ನಂತೆ 6 ನೇ ಪ್ರತಿವಾದಿಯ ಭಾಗಕ್ಕೆ ಹೋದ ನಂತರ ಎಂ.ಆರ್,49/2006-07 ರಂತೆ ಖಾತೆ ಮಾಡಲಾಯಿತು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ. ಖಾತೆ ಮಾಡಿಸಿಕೊಂಡ ನಂತರ 6 ನೇ ಪ್ರತಿವಾದಿಯೇ ದಾವಾ ತಪಶೀಲು ಆಸ್ತಿ

ನಂ.4 ರ ಸಂಪೂರ್ಣ ಸ್ವಾಧೀನಾನುಭವದಲ್ಲಿದ್ದುಕೊಂಡು ಹಕ್ಕುದಾರರಾಗಿರುತ್ತಾರೆಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ. ದಾವಾ ತಪಶೀಲು ಆಸ್ತಿ ನಂ.4 ನ್ನು 5 ಮತ್ತು 6 ನೇ ಪ್ರತಿವಾದಿಗಳು ಅಭಿವೃದ್ದಿಪಡಿಸಿರುತ್ತಾರೆಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ.

ದಾವಾ ಆಸ್ತಿಗಳನ್ನು ನೋಡಿರುತ್ತೇನೆ. 5 ನೇ ಪ್ರತಿವಾದಿ ಕ್ರಯಕ್ಕೆ ಪಡೆದ ಆಸ್ತಿ ಹೊಸೂರಿನಲ್ಲಿ ಇದೆ. 5 ಮತ್ತು 6 ನೇ ಪ್ರತಿವಾದಿ ಅಭಿವೃದ್ದಿಪಡಿಸಿದ ಆಸ್ತಿಯನ್ನು ಲಪಟಾಯಿಸುವ ಉದ್ದೇಶದಿಂದ ಯಾವುದೇ ಹಕ್ಕು ಇಲ್ಲದೇ ಇದ್ದರೂ, ದಾವಾ ತಪಶೀಲು ಆಸ್ತಿ ನಂ.4 ನ್ನು ಸೇರಿಸಿಕೊಂಡು ಸುಳ್ಳು ದಾವೆ ಹೂಡಿರುತ್ತೀರಾ ಎಂದರೆ ಸರಿಯಲ್ಲ. ದಾವಾ ತಪಶೀಲು ಆಸ್ತಿ ನಂ.4, 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಯಾಗಿದ್ದು, ಅದನ್ನು ಮಾರಾಟ ಮಾಡಲು ಅವರಿಗೆ ಸಂಪೂರ್ಣ ಹಕ್ಕು ಇದೆ ಎಂದರೆ ಸರಿಯಲ್ಲ. ದಾವಾ ತಪಶೀಲು ಆಸ್ತಿ ನಂ.4, 1 ನೇ ಪ್ರತಿವಾದಿಗೆ ಸ್ವಯಾರ್ಜಿತ ಆಸ್ತಿ ಆಗಿದ್ದು, ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. 5 ಮತ್ತು 6 ನೇ ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಹಾಗೂ 5 ನೇ ಪ್ರತಿವಾದಿಗೆ ಮಾರಾಟ ಮಾಡಿರುವ ಆಸ್ತಿಯನ್ನು ಲಪಟಾಯಿಸಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ದಾವಾ ಆಸ್ತಿಗಳ ಮೇಲೆ ನಿಮಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.